# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.70 : ರಾಜಗೋಪಾಲ ನಗರ

**ದಿನಾಂಕ: 08.10.2021 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 5 | ಸ್ವಾಮಿ ಎಸ್ ಆರ್ | ಕಿರಿಯ ಆರೋಗ್ಯ ಪರಿವೀಕ್ಷಕರು- ವಾರ್ಡ್ 70 |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ವಿಷಯ ಸಂಖ್ಯೆ:1</u>**
  **ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬಗ್ಗೆ:-**

ವಾರ್ಡ್ 70ರ, ಹಿರಿಯ ಆರೋಗ್ಯ ಸಹಾಯಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಈ ಹಿಂದೆ ಕೆಲಸ ನಿರ್ವಹಿಸುತ್ತಿದ್ದ ಪೌರ ಕಾರ್ಮಿಕರು ವಯೋ ನಿವೃತ್ತಿ ಹೊಂದಿರುವುದರಿಂದ 38 ಪೌರ ಕಾರ್ಮಿಕರ ಕೊರತೆ ಇರುತ್ತದೆ. ಅವರ ಬದಲಿಗೆ ಬದಲಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳಬೇಕೆಂದು ಸಭೆಗೆ ತಿಳಿಸಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಪೌರ ಕಾರ್ಮಿಕರನ್ನು ನೇಮಿಸಿಕೊಳ್ಳುವ ಬಗ್ಗೆ ಎಸ್.ಡಬ್ಲ್ಯೂ.ಎಂ ಸೆಲ್ ಮುಖಾಂತರ ಮೇಲಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದರು.

- **<u>ವಿಷಯ ಸಂಖ್ಯೆ:2</u>**
  **ಹೆಚ್ಚುವರಿ ಟಾಟಾ ಏಸ್ ಆಟೋಗಳನ್ನು ನೇಮಿಸಿಕೊಳ್ಳುವ ಬಗ್ಗೆ:-**

ವಾರ್ಡ್ 70ರ, ಹಿರಿಯ ಆರೋಗ್ಯ ಸಹಾಯಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ 4 ಟಾಟಾ ಏಸ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಮನೆಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಇನ್ನೂ 2 ಟಾಟಾ ಏಸ್ ಆಟೋಗಳು ಹೆಚ್ಚುವರಿಯಾಗಿ ಅವಶ್ಯಕವಿರುವುದಾಗೀ ಸಭೆಗೆ ತಿಳಿಸಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಹೆಚ್ಚುವರಿ 2 ಟಾಟಾ ಏಸ್‌ಗಳನ್ನು ನಿಯೋಜಿಸಿಕೊಳ್ಳುವ ಬಗ್ಗೆ ಎಸ್.ಡಬ್ಲ್ಯೂ.ಎಂ ಸೆಲ್ ಮುಖಾಂತರ ಮೇಲಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದರು.

- **ವಿಷಯ ಸಂಖ್ಯೆ:3**
  **ರಸ್ತೆ ಬದಿಯ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವ ಬಗ್ಗೆ:-**

ನೋಡಲ್ ಅಧಿಕಾರಿ ರವರು ಮಾತನಾಡಿ, ದಿನಾಂಕ:03-10-2021 ರಂದು ಬಿದ್ದ ಭಾರೀ ಮಳೆಯಿಂದಾಗೀ ರಸ್ತೆ ಬದಿಯ ಚರಂಡಿಗಳಲ್ಲಿ ಹೂಳು ತುಂಬಿದ್ದು, ವಾರ್ಡಿನ ಹಲವು ಕಡೆಗಳಲ್ಲಿ ಚರಂಡಿಗಳು ಬ್ಲಾಕ್ ಆಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಸಹಾಯಕ ಅಭಿಯಂತರರು ಮಾತನಾಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2021-22ನೇ ಸಾಲಿನ ಆಯವ್ಯಯದಲ್ಲಿ ನಿರ್ವಹಣೆ ಮತ್ತು ಅಭಿವೃದ್ಧಿಯ ಹೊಸ ಕಾಮಗಾರಿಗಳಿಗೆ ವಾರ್ಡ್ 70ಕ್ಕೆ ಮೀಸಲಿಟ್ಟಿರುವ ಅನುದಾನದಲ್ಲಿ ರೂ.20.00 ಲಕ್ಷಗಳು & ರೂ 15.25 ಲಕ್ಷಗಳನ್ನು ಸಿಲ್ಟ್ ಕಾಮಗಾರಿಗಳನ್ನು ನಿರ್ವಹಿಸಲು ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದೆ ಹಾಗೂ ರೂ.15.00 ಲಕ್ಷಗಳಿಗೆ ಸಿಲ್ಟ್ & ಟ್ರ್ಯಾಕ್ಟರ್ ಕಾಮಗಾರಿಗೆ ಈಗಾಗಲೇ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗ ಕಛೇರಿಯಲ್ಲಿ ಟೆಂಡರ್ ಆಹ್ವಾನಿಸಿದ್ದು, ಕಾಮಗಾರಿಯನ್ನು ಪ್ರಾರಂಭಿಸಿದ್ದು, ಆದ್ಯತೆಯ ಮೇರೆಗೆ ಹೂಳನ್ನು ತೆಗೆಯಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

- **ವಿಷಯ ಸಂಖ್ಯೆ: 4: ಸಾರ್ವಜನಿಕ ಶೌಚಾಲಯವನ್ನು ದುರಸ್ಥಿ ಪಡಿಸುವ ಬಗ್ಗೆ**

ವಾರ್ಡ್ 70ರ, ಹಿರಿಯ ಆರೋಗ್ಯ ಸಹಾಯಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯ ಜಿ.ಕೆ.ಡಬ್ಲ್ಯೂ ಬಡಾವಣೆ ಉದ್ಯಾನವನದಲ್ಲಿರುವ ಶೌಚಾಲಯವನ್ನು ಕೆಲವು ದುರಸ್ಥಿ ಪಡಿಸಬೇಕೆಂದು ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ಸದರಿ ಶೌಚಾಲಯವನ್ನು ದುರಸ್ಥಿಪಡಿಸಲು ರೂ.2.50ಲಕ್ಷಗಳ ವೆಚ್ಚದಲ್ಲಿ ಟೆಂಡರ್ ಕರೆದು ಕಾರ್ಯಾದೇಶ ನೀಡಲಾಗಿರುತ್ತದೆ. ಶೀಘ್ರದಲ್ಲೆ ದುರಸ್ಥಿಪಡಿಸಲಾಗುವುದೆಂದು ತಿಳಿಸಿದರು.

**ವಿಷಯ ಸಂಖ್ಯೆ: 5:- ರಸ್ತೆಗುಂಡಿಗಳ ಬಗ್ಗೆ**

ದಿನಾಂಕ:03-10-2021 ರಂದು ಬಿದ್ದ ಭಾರೀ ಮಳೆಯಿಂದಾಗೀ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಮಳೆಯು ಬಿಡುವು ಕೊಟ್ಟ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

**ವಿಷಯ ಸಂಖ್ಯೆ: 6:- ಫುಟ್ ಪಾತ್ ನಿರ್ವಹಣಾ ಕಾಮಗಾರಿಯಲ್ಲಿ ಸಾರ್ವಜನಿಕರ ಅಭಿಪ್ರಾಯಗಳನ್ನು ಕ್ರೋಢೀಕರಿಸಿಕೊಳ್ಳುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ರೂ.20.00 ಲಕ್ಷಗಳಿಗೆ ಪಾದಚಾರಿ ಕಾಮಗಾರಿಯನ್ನು ನಿರ್ವಹಿಸಲು ಸಾರ್ವಜನಿಕರ ಆದ್ಯತೆ ಮೇರೆಗೆ (Public participation) ಕಾಮಗಾರಿಯನ್ನು ನಿರ್ವಹಿಸಲು ತಿಳಿಸಿದರು.

ಸಹಾಯಕ ಅಭಿಯಂತರರು ಮಾತನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ ರೂ.20.00 ಲಕ್ಷಗಳನ್ನು ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ನಿರ್ವಹಣೆಗಾಗಿ ರೂ.20.00 ಲಕ್ಷಗಳ ಅನುದಾನವನ್ನು ನಿಗದಿ ಮಾಡಿ, ಕ್ರಿಯಾಯೋಜನೆಯನ್ನು ಈಗಾಗಲೇ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗರವರಿಗೆ ಸಲ್ಲಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 70, ರಾಜಗೋಪಾಲ ನಗರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.70, ರಾಜಗೋಪಾಲ ನಗರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ